# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 490
2. ಸದಸ್ಯರ ಹೆಸರು : ಶ್ರೀ ಡಿ.ಟಿ.ಶ್ರೀನಿವಾಸ್
3. ಉತ್ತರಿಸಬೇಕಾದ ದಿನಾಂಕ: : 12.12.2024
4. ಉತ್ತರಿಸುವವರು : ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಕೈಗೊಂಡಿರುವ ಸಣ್ಣ ನೀರಾವರಿ ಯೋಜನೆಗಳು ಎಷ್ಟು; ಇವುಗಳ ಅನುಷ್ಠಾನಕ್ಕೆ ಸರ್ಕಾರ ನಿಗಧಿಪಡಿಸಿರುವ ಅನುದಾನ ಎಷ್ಟು; | ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಪ್ರಸಕ್ತ ಸಾಲಿನಲ್ಲಿ ವಿವಿಧ ಲೆಕ್ಕಶೀರ್ಷಿಕೆಗಳಡಿ ಒಟ್ಟು 538 ಕಾಮಗಾರಿಗಳನ್ನು ಸಣ್ಣ ನೀರಾವರಿ ಇಲಾಖೆಯಿಂದ ರೂ.64453.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲಾಗುತ್ತಿದೆ. ಇದುವರೆವಿಗೂ ಯಾವುದೇ ವೆಚ್ಚವಾಗಿರುವುದಿಲ್ಲ. ಜಿಲ್ಲಾವಾರು ವಿವರಗಳು ಈ ಕೆಳಗಿನಂತಿವೆ. (ಕೆಳಗಿನ ಕೋಷ್ಟಕ ನೋಡಿ) |
| ಆ | ಮಧ್ಯ ಕರ್ನಾಟಕ ಹಾಗೂ ಗಡಿ ಭಾಗದ ಜಿಲ್ಲೆ ಕೋಲಾರ, ಚಿತ್ರದುರ್ಗ, ತುಮಕೂರು ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸುವಲ್ಲಿ ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಂಡಿದೆ; | ಮಧ್ಯ ಕರ್ನಾಟಕ ಹಾಗೂ ಗಡಿ ಭಾಗದ ಜಿಲ್ಲೆ ಕೋಲಾರ, ಚಿತ್ರದುರ್ಗ, ತುಮಕೂರು ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಚೆಕ್ ಡ್ಯಾಂ/ಬ್ರಿಡ್ಜ್‌ಕಂ ಬ್ಯಾರೇಜ್ ನಿರ್ಮಾಣ, ಏತ ನೀರಾವರಿ ಯೋಜನೆಗಳ ಮೂಲಕ ಕೆರೆಗಳಿಗೆ ನೀರು ತುಂಬಿಸುವುದು ಹಾಗೂ ಕೆರೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ಹಂಚಿಕೆಯಾದ ಅನುದಾನಕ್ಕನುಗುಣವಾಗಿ ಸದರಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕ್ರಮವಹಿಸಲಾಗುತ್ತಿದೆ. |

| ಕ್ರ.ಸಂ | ಜಿಲ್ಲೆ | ಕಾಮಗಾರಿಗಳ ಸಂಖ್ಯೆ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|
| 1 | ಚಿತ್ರದುರ್ಗ | 108 | 2750.00 |
| 2 | ತುಮಕೂರು | 329 | 58864.00 |
| 3 | ಚಿಕ್ಕಬಳ್ಳಾಪುರ | 42 | 1045.00 |
| 4 | ಕೋಲಾರ | 59 | 1794.00 |
| | **ಒಟ್ಟು** | **538** | **64453.00** |

ಕಡತ ಸಂಖ್ಯೆ: ಸನೀಇ 123 ಎಲ್.ಸಿ.ಕ್ಯೂ 2024

(ಸಹಿ)

**(ಎನ್.ಎಸ್.ಬೋಸರಾಜು)**
ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.